Received on 9/2/2021
WVP 4:52 PM.

ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22212652, 22212941

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/175/ಅಕಾನಿ/2020-21

ದಿನಾಂಕ: 09.02.2021

## ಅಧಿಕೃತ ಜ್ಞಾಪನ

ವಿಷಯ: ಅನ್ಯಕಾರ್ಯನಿಮಿತ್ತ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಸುತ್ತೋಲೆ ಸಂಖ್ಯೆ:ಕಾಶಿಇ/ಶೈವಿ/25/ಸುತ್ತೋಲೆ/2010-11 ದಿ:22.12.2010.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಆಕುಕ 30 ಅಮುಕಾ 2021 ದಿನಾಂಕ:02.02.2021.
3. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ರಾಮನಗರ, ರವರ ಪತ್ರ ಸಂಖ್ಯೆ:ಸಪ್ರದಕಾರಾ/258/2020-21 ದಿನಾಂಕ:03.02.2021.

* * * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಮನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ದಿನಾಂಕ:10.02.2021 ರಂದು ಅರ್ಥಶಾಸ್ತ್ರ ವಿಭಾಗದ ವತಿಯಿಂದ *AN ANALYSIS OF INDIAN UNION BUDGET- 2021-22* ಎಂಬ ವಿಷಯದ ಬಗ್ಗೆ ಒಂದು ದಿನದ ರಾಷ್ಟ್ರಮಟ್ಟದ ಬಹುಶಿಸ್ತೀಯ ವಿಚಾರ ಸಂಕಿರಣವನ್ನು ಏರ್ಪಡಿಸಲಾಗಿದ್ದು, ಸದರಿ ವಿಚಾರ ಸಂಕಿರಣದಲ್ಲಿ ಭಾಗವಹಿಸಲು ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಅಧ್ಯಾಪಕರುಗಳಿಗೆ ಉಲ್ಲೇಖ-1ರ (ಒಂದು ಸೆಮಿಸ್ಟರ್ ಅವಧಿಗೆ 04 ದಿನಗಳಿಗೆ ಮೀರದಂತೆ) ಸುತ್ತೋಲೆಯನ್ವಯ ಅನುಮತಿ ನೀಡಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ಹಾಜರಾತಿ ಪ್ರಮಾಣ ಪತ್ರವನ್ನು ಒಪ್ಪಿಸುವ ನಿಬಂಧನೆಗೊಳಪಟ್ಟು ಸರ್ಕಾರದ/ಇಲಾಖೆಯ ವತಿಯಿಂದ ಯಾವುದೇ ಭತ್ಯೆಗಳಿಲ್ಲದೆ ಹಾಗೂ ಉಲ್ಲೇಖಿತ-2ರ ಸುತ್ತೋಲೆಯಲ್ಲಿನ ಕೋವಿಡ್-19ರ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವ ಷರತ್ತಿಗೊಳಪಟ್ಟು ಅನ್ಯಕಾರ್ಯನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ.

(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:
1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ. – ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ರಾಮನಗರ – 562 159.
3. ಕಛೇರಿ ಪ್ರತಿ.